ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಕೈಗಾರಿಕಾ ಉದ್ದೇಶಕ್ಕಾಗಿ ಸರ್ಕಾರವು ಭೂಮಿ ಸ್ವಾಧೀನ ಪಡಿಸಿಕೊಂಡಿರುವ ಕುರಿತು

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ):-

1037 (1147) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 3 ವರ್ಷಗಳಲ್ಲಿ ಕೈಗಾರಿಕಾ ಪ್ರದೇಶವನ್ನು ಅಳವಡಿಸಿ ಹಂಚಿಕೆ ಮಾಡುವಂತೆ ಕೋರಿದ ಕಂಪನಿಗಳೆಷ್ಟು ಮತ್ತು ಅವು ಯಾವುವು ;

(ಆ) ಕೈಗಾರಿಕಾ ಉದ್ದೇಶಕ್ಕಾಗಿ ಸರ್ಕಾರವು ಎಲ್ಲೆಲ್ಲಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದೆ ;

(ಇ) ಸ್ವಾಧೀನಪಡಿಸಿಕೊಂಡ ಭೂಮಿಗೆ ಸರ್ಕಾರ ನಿಗದಿಪಡಿಸಿದ ಮಾನದಂಡ, ಹಂಚಿಕೆ ಕ್ರಮಗಳೇನು ;

(ಈ) ಹಂಚಿಕೆ ಪಡೆದ ಕಂಪನಿಗಳು ಕಾರ್ಯಾರಂಭ ಮಾಡಿರುತ್ತವೆಯೇ; ಮಾಡಿದಲ್ಲಿ, ಸ್ಥಳೀಯ ಕೆಲಸಗಾರರನ್ನು ನೇಮಿಸಿಕೊಳ್ಳಲಾಗಿದೆಯೇ; ಇಲ್ಲದಿದ್ದಲ್ಲಿ, ಶೀಘ್ರವಾಗಿ ಪ್ರಾರಂಭಿಸುವ ಬಗ್ಗೆ ಸರ್ಕಾರದ ವತಿಯಿಂದ ಕ್ರಮ ಕೈಗೊಳ್ಳಲಾಗಿದೆಯೇ ?